**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಸೇಡಂ.**

**ಸಿಸಿ ನಂ.82/2018**

ಫಿರ್ಯಾದಿಃ ಕರ್ನಾಟಕ ಸರಕಾರ ಪರಃ ಅಬಕಾರಿ ಪೊಲೀಸರು, ಸೇಡಂ.

-ಃಃ ವಿರುದ್ದ ಃಃ-

ಆರೋಪಿಃ ವೆಂಕಟಮ್ಮ ಗಂಡ ಮೊಗಲಪ್ಪ,
ವಃ 51 ವರ್ಷ, ಉಃ ಮನೆಗೆಲಸ,
ಸಾಃ ಮಲ್ಕಾಪಲ್ಲಿ ಗ್ರಾಮ, ತಾಃ ಸೇಡಂ.

----

**ದೋ ಷಾ ರೋ ಪ ಣೆ**

ನಾನು ಶ್ರೀ ಸುನೀಲ್.ಎಸ್.ತಳವಾರ, ಬಿಎ.ಎಲ್.ಎಲ್.ಬಿ., ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರು, ಸೇಡಂ, ನಿನ್ನ ಮೇಲೆ ಹೊರಿಸುವ ಆರೋಪವೇನೆಂದರೆ,

ಆರೋಪಿತಳಾದ ನೀನು ದಿನಾಂಕ 15-13-2013 ರಂದು ರಾತ್ರಿ 7.00 ಗಂಟೆ ಸುಮಾರಿಗೆ ಸೇಡಂ ಅಬಕಾರಿ ಪೊಲೀಸ್ ಠಾಣಾ ಹದ್ದಿಯಲ್ಲಿರುವ ಸೇಡಂ ತಾಲೂಕಿನ ಮಲ್ಕಾಪಲ್ಲಿ ಗ್ರಾಮದ ಆರೋಪಿತಳಾದ ನಿನ್ನ ಮನೆಯಲ್ಲಿ ನೀನು ಅಕ್ರಮವಾಗಿ ಕಲಬೆರಕೆ ಸೇಂದಿಯನ್ನು ಯಾವುದೇ ಪರವಾನಿಗೆ ಇಲ್ಲದೇ ಸಾರ್ವಜನಿಕರಿಗೆ ಮಾರಾಟ ಮಾಡುತ್ತಿದ್ದು, ಚಾಸಾ-3, 5 ಮತ್ತು 6 ರವರು ಕೂಡಿಕೊಂಡು, ಚಾಸಾ-1 ಮತ್ತು 2 ನೇದ್ದವರ ಸಮಕ್ಷಮದಲ್ಲಿ ದಾಳಿ ಮಾಡಿ, ನಿನ್ನ ವಶದಲ್ಲಿದ್ದ ನಾಲ್ಕು ಪ್ಲಾಸ್ಟಿಕ್ ಕೊಡದಲ್ಲಿನ ಒಟ್ಟು 10 ಲೀಟರ್ ಕಲಬೆರಕೆ ಸೇಂದಿ, ಒಂದು ಬಿಳಿ ಬಣ್ಣದ ಪ್ಲಾಸ್ಟಿಕ್ ಕ್ಯಾನನಲ್ಲಿ 5 ಲೀಟರ್ ಕಳ್ಳಭಟ್ಟಿ ಸಾರಾಯಿಯನ್ನು ವಶಪಡಿಸಿಕೊಂಡಿದ್ದು, ಅಲ್ಲದೇ ಸದರಿ ಕಲಬೆರಕೆ ಸಾರಾಯಿ ಮತ್ತು ಸೇಂದಿ ಸೇವನೆಯಿಂದ ಮಾನವ ಜೀವಕ್ಕೆ ಹಾನಿಯಾಗುತ್ತದೆಂದು ಗೊತ್ತಿದ್ದರೂ ಸಹ ಸಾರ್ವಜನಿಕರಿಗೆ ಕಲಬೆರಕೆ ಸೇಂದಿ ಮಾರಾಟ ಮಾಡಿದ್ದರಿಂದ, ನೀನು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32 ಮತ್ತು 34 ಹಾಗೂ ಭಾ.ದಂ.ಸಂ. 273 ರಡಿಯಲ್ಲಿ ಶಿಕ್ಷಾರ್ಹ ಅಪರಾಧಗಳನ್ನು ಮಾಡಿರುತ್ತಿ, ಅದು ನನ್ನ ಸಂಜ್ಞೆತೆಗೆ ಬಂದಿರುತ್ತದೆ.

ಕಾರಣ ಮೇಲೆ ಹೇಳಿದ ಅಪರಾಧಗಳಿಗಾಗಿ ವಿಚಾರಣೆ ಎದುರಿಸಬೇಕೆಂದು ನಿರ್ದೇಶಿಸುತ್ತಿದ್ದೇನೆ.

ಸಹಿ/-

ದಿನಾಂಕಃ 27-10-2021 ಪ್ರ.ದ.ನ್ಯಾ.ದಂ. ಸೇಡಂ.